ಗಡಿಕನ್ನಡಿಗ

www.gadikannadiga.com

ಸಂಪಾದಕ:ಮುರುಗೇಶ ಬಿ.ಶಿವಪೂಜಿ

ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ,ಕೊಪ್ಪಳ,ಗದಗ, ವಿಜಯಪುರ, ವಿಜಯನಗರ ಬಳ್ಳಾರಿಗಳಿಂದ ಏಕಕಾಲಕ್ಕೆ ಪ್ರಕಟಿತ

ಸಂಪುಟ:22/ಸಂಚಿಕೆ:128 RNI NO.KAR KAN/2003/10452:No./PMG/KA/NK/BM/743/24-26 ಮಂಗಳವಾರ ದಿನಾಂಕ: 17-04-2024 ಪುಟಗಳು: 6 ಬೆಲೆ:1 ರೂ ☎ 9480498694 / Email-mbshivapuji@gmail.com2

ಕುಮಾರಸ್ವಾಮಿ ವಿರುದ್ಧ ಹಿಗ್ಗಾ ಮುಗ್ಗಾ ವಾಗ್ದಾಳಿ ನಡೆಸಿದ ಡಿಕೆಶಿ

ಬೆಳಗಾವಿ.ಮಿಸ್ಟರ್ ಕುಮಾರಸ್ವಾಮಿ ಸಂಸದನಾಗಿ ಆಯ್ಕೆಯಾಗುವುದು ಅನುಮಾನ. ವಿಧಾನಸೌಧದ ಅಧಿವೇಶನದಲ್ಲಿ ನನ್ನ ಮೇಲೆ ಮಾಡಿರುವ ಆರೋಪವನ್ನು ಚರ್ಚೆ ಮಾಡುತ್ತೇನೆಂದು ಕಳೆದ ಬಾರಿಯೂ ಕರೆದಾಗ ಬರಲೇ ಇಲ್ಲ ಆಸಾಮಿ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ವಾಗ್ದಾಳಿ ನಡೆಸಿದರು.

ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು. ಎಲ್ಲ ಮಹಿಳೆಯರಿಗೆ ಸ್ವಾಭಿಮಾನದ ಪ್ರಶ್ನೆ. ಶಕ್ತಿ ಕೊಟ್ಟಿರುವ ಕಾರ್ಯಕ್ರಮದಿಂದ ದಾರಿ ತಪ್ಪಿದ್ದಾರೆ ಎಂದು ಕುಮಾರಸ್ವಾಮಿ ಹೇಳಿಕೆ ನೀಡಿದ್ದಾರೆ. ಇವರಿಗೆ ತಕ್ಕ ಪಾಠ ಕಲಿಸಲು ಎಲ್ಲರೂ ಪ್ರತಿಯೊಂದು ತಾಲೂಕಿನಲ್ಲಿ ಹೋರಾಟ ಮಾಡಬೇಕು ಎಂದು ಕರೆ ನೀಡಿದರು.

ಕಾಂಗ್ರೆಸ್ ಸರಕಾರದ ಗ್ಯಾರಂಟಿ ಯೋಜನೆಯ ಲಾಭ ಪಡೆಯುತ್ತಿರುವ ಬಿಜೆಪಿಯ ಮೂವರಿಗೆ ಹಿಂಪಡೆಯುವಂತೆ ಕರೆ ಕೊಡಲಿ ನೋಡಣ ಎಂದು ಕುಮಾರಸ್ವಾಮಿಗೆ ಸವಾಲ್ ಹಾಕಿದರು.

ಪ್ರಜಾ ಧ್ವನಿ ಬೆಳಗಾವಿಯಲ್ಲಿ ಯಾತ್ರೆ ಪ್ರಾರಂಭ ಮಾಡಿ ಚಿಕ್ಕೋಡಿಯಲ್ಲಿ ಗೃಹ ಜ್ಯೋತಿ ಘೋಷಣೆ ಮಾಡಿ ರಾಜ್ಯದ ವಿವಿಧ ಮೂಲೆಯಲ್ಲಿ ಯಾತ್ರೆ ಆರಂಭಿಸಿ ಮೈಸೂರಿನಲ್ಲಿ ಅಂತ್ಯಗೊಳಿಸಿ.

ಬಿಜೆಪಿಯ ಪ್ರಣಾಳಿಕೆಗೆ ಶಕ್ತಿ ಯಾವತ್ತು ಬರುವುದಿಲ್ಲ. ಕೇಂದ್ರದಲ್ಲಿ ಬಿಜೆಪಿ ಸರಕಾರ ಇತ್ತು. ಇನರ ಭಾವನೆ ಬಗ್ಗೆ ಎಂದಿಗೂವ ವಿಚಾರ ಮಾಡಲಿಲ್ಲ. ಕಳೆದ ಚುನಾವಣೆಯ ಪ್ರಣಾಳಿಕೆಯಲ್ಲಿ ಕಪ್ಪು ಹಣ ತಂದು ಎಲ್ಲರ ಖಾತೆಗೆ 15 ಲಕ್ಷ ಹಣ ಹಾಕುವುದಾಗಿ ಹೇಳಿದ್ದರು. ನಮಗೆ ಅವಕಾಶ ಇದ್ದಾಗ. ಎಷ್ಟು ಹಣ ಬಂತು. ಜನರ ಖಾತೆಗೆ ಹಣ ಹಾಕಿದರಾ ಎನ್ನುವುದನ್ನು ಪ್ರಧಾನ ನರೇಂದ್ರ ಮೋದಿ ಹಾಗೂ ಜೆ.ಪಿ.ನಡ್ಡಾ ಸೇರಿದಂತೆ ಎಲ್ಲ ನಾಯಕರು ಉತ್ತರ ಕೊಡಬೇಕು ಎಂದರು.

ರೈತರ ಆದಾಯ ದ್ವಿಗುಣ ಮಾಡುವುದಾಗಿ ಹೇಳಿದ್ದರು. ಯಾವ ರೈತರ ಆದಾಯ ದ್ವಿಗುಣವಾಗಿದೆ. ಕೇಂದ್ರ ಸರಕಾರ ರೈತ ವಿರೋಧಿ ಕೃಷಿ ಮಸೂದೆ ಜಾರಿ ಮಾಡಿ ಹಿಂಪಡೆದರು. ನಮ್ಮ ಸರಕಾರ ಬಂದ ಬಳಿಕ ನಾವು ಅದನ್ನು ಹಿಂಪಡೆಯಲು ರಾಜ್ಯ ಸರಕಾರ ಮುಂದಾದಾಗ ಅದಕ್ಕೆ ವಿರೋಧಿಸಿದರು ಎಂದರು.

ಪ್ರತಿ ವರ್ಷ 2 ಕೋಟಿ ಉದ್ಯೋಗ ಕೊಡುವುದಾಗಿ ಘೋಷಿಸಿದ್ದರು. ಎಷ್ಟು ಜನರಿಗೆ ಉದ್ಯೋಗ ಕೊಡಿಸಿದ್ದೀರಿ ಎಂದು ಪ್ರಶ್ನಿಸಿದರು.

ರಾಜ್ಯದಲ್ಲಿ ವಿಧಾನಸಭಾ ಚುನಾವಣೆಯಲ್ಲಿ ನಾವು ಜನರಿಗೆ ನೀಡಿದ ಭರವಸೆಯ ಹಾಗೆ ಈಡೇರಿಸಿದ್ದೇವೆ. ಅವರು ನಮಗೆ ಮತ ಹಾಕುತ್ತಾರೆ. ನೀವು ಜನರಿಗೆ ಏನು ಮಾಡಿದ್ದೀರಿ ಎಂದು ಬಿಜೆಪಿಗೆ ಮತಹಾಕಬೇಕು ಎಂದರು.

ಕೊರೊನಾ ಸಂದರ್ಭದಲ್ಲಿ ಕೇಂದ್ರದ ಸಚಿವರಾಗಿದ್ದ ಸುರೇಶ ಅಂಗಡಿ ಅವರು ಮೃತಪಟ್ಟಾಗ ಬೆಳಗಾವಿಯಲ್ಲಿ ಜನರ ದರ್ಶನ ಮಾಡಲು ಅವಕಾಶ ಕೊಡದೆ ಕೆಟ್ಟ ರೀತಿಯಲ್ಲಿ ಅಂತ್ಯಸಂಸ್ಕಾರ ಮಾಡಿದ್ದು ದುರಂತ ಎಂದರು.

ಶಾಸಕರಾದ ಲಕ್ಷ್ಮಣ ಸವದಿ, ಮಹಾಂತೇಶ ಕೌಜಲಗಿ, ರಾಜು ಕಾಗೆ, ಆಸೀಫ್ ಸೇಠ್, ಬಾಬಾಸಾಹೇಬ ಪಾಟೀಲ,ಮಹೇಶ ತಮ್ಮಣ್ಣವರ, ಗಣೇಶ ಹುಕ್ಕೇರಿ, ಅಶೋಕ ಪಟಣ್ಣ, ವಿಧಾನ ಪರಿಷತ್ತಿನ ಸದಸ್ಯರಾದ ಚನ್ನರಾಜ ಹಟ್ಟಿಹೊಳಿ, ಪ್ರಕಾಶ ಹುಕ್ಕೇರಿ, ಬೆಳಗಾವಿ ಗ್ಯಾರಂಟಿ ಯೋಜನೆ ಪ್ರಾಧಿಕಾರದ ಅಧ್ಯಕ್ಷ ವಿನಯ ನಾವಲಗಟ್ಟಿ, ಬುಡಾ ಅಧ್ಯಕ್ಷ ಲಕ್ಷ್ಮಣ ಚಿಂಗಳೆ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಜಿಲ್ಲೆಯಲ್ಲಿ ಕಾಲರಾ ರೋಗ ಹರಡದಂತೆ ಕೈಗೊಳ್ಳಬೇಕಾದ ಮುಂಜಾಗ್ರಕತಾ ಕ್ರಮಗಳು

ಗದಗ ಏಪ್ರಿಲ್ 15: ಕಾಲರಾ ಪ್ರಕರಣಗಳು ವರದಿಯಾಗುತ್ತಿರುವ ಹಿನ್ನೆಲೆ ಅಗತ್ಯ ಮುನ್ನೆಚ್ಚರ ವಹಿಸುವಂತೆ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಅವರು ತಿಳಿಸಿದ್ದಾರೆ. ಕಾಲರವು ವಿಬ್ರಿಯೋ ಕಾಲರಾ ಎಂಬ ಬ್ಯಾಕ್ಟೀರಿಯಾದಿಂದ ಹರಡುವ ಕಾಯಿಲೆಯಾಗಿದ್ದು, ಈ ಬ್ಯಾಕ್ಟೀರಿಯಾ ಮನುಷ್ಯರ ದೇಹದಲ್ಲಿ ಕಲುಷಿತ ನೀರನ್ನು ಕುಡಿಯುವು ದರಿಂದ ಮತ್ತು ಕಲುಷಿತ ಆಹಾರ ಸೇವಿಸುವುದರ ಮುಖಾಂತರ ಪ್ರಸರಣ ವಾಗುತ್ತದೆ. ಇದರಿಂದ ಅತೀಸಾರ, ವಾಕರಿಕೆ, ವಾಂತಿ, ನರ್ಜಲೀಕರಣ ಮತ್ತು ಸ್ನಾಯು ಸೆಳೆತದಂತಹ ಸಮಸ್ಯೆಗಳು ಉದ್ಭವಿಸುತ್ತವೆ. ಸಾರ್ವಜನಿಕರು ಕಾಲರಾ ರೋಗ ಹರಡದಂತೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಜಿಲ್ಲಾಧಿಕಾರಿಯವರು ಕೋರಿದ್ದಾರೆ. ಕುದಿಸಿ, ಆರಿಸಿದ ನೀರನ್ನು ಕುಡಿಯುವುದು. ಸಾರ್ವಜನಕರು ನೀರಿನ ಕೊಳಾಯಿ ಮತ್ತು ಸ್ಥಳವನ್ನು ಸ್ವಚ್ಛವಾಗಿ ಇಡುವುದು. ತಾಜಾ ಹಣ್ಣುಗಳು, ತರಕಾರಿಗಳನ್ನು ಮತ್ತು ಆಹಾರ ಪದಾರ್ಥಗಳನ್ನೇ ಉಪಯೋಗಿಸುವುದು. ಊಟ ತಯಾರಿಸುವ ಮತ್ತು ಊಟ ಮಾಡುವ ಮುನ್ನ ಕೈಗಳನ್ನು ಸಾಬೂನು ಮತ್ತು ನೀರಿನಂದ ಸ್ವಚ್ಛಗೊಳಿಸುವುದು. ಶೌಚಾಲ ಯವನ್ನು ಉಪಯೋಗಿಸುವ ಮುಂಚೆ ಮತ್ತು ನಂತರ ಕೈಗಳನ್ನು ಸಾಬೂ ನನಂದ ಸ್ವಚ್ಛಗೊಳಿಸುವುದು. ಸಾರ್ವಜನಕ ಸ್ಥಳಗಳಲ್ಲಿ ಸಿದ್ಧಪಡಿಸಿದ ಆಹಾರ ಪದಾರ್ಥಗಳ ಮೇಲೆ ಕ್ರಿಮಿ ಕೀಟಗಳು ಕುಳಿತು ಕೊಳ್ಳುವಂತೆ ಸದಾ ಮುಚ್ಚಳದಿಂದ ಮುಚ್ಚಿಡುವಂತೆ ವ್ಯಾಪಾರಸ್ಥರಿಗೆ ತಿಳಿಸಿ ಹೇಳುವುದು. 15 ದಿನಕ್ಕೊಮ್ಮೆ ಸಾರ್ವಜನಕರಿಗೆ ಸರಬರಾಜು ಮಾಡುವ ಕುಡಿಯುವ ನೀರನ್ನು ಪರೀಕ್ಷಿಸುವುದು ಮತ್ತು ಅದರ ಶುದ್ಧತೆಗಾಗಿ ಕೂಡಲೇ ಅಗತ್ಯ ಕ್ರಮ ವಹಿಸುವಂತೆ ಜಿಲ್ಲಾಧಿಕಾರಿ ಅವರು ಹೇಳಿದ್ದಾರೆ.

ರಾಜ್ಯಕ್ಕೆ ಮಾದರಿಯಾದ ಪೂರ್ವ ಸಿದ್ಧತಾ ಪರೀಕ್ಷೆಗಳು

ಬೆಳಗಾವಿ,ಏ.15 : ರಾಜ್ಯದಲ್ಲಿಯೇ ಪ್ರಥಮ ಬಾರಿಗೆ ಜಿಲ್ಲೆಯ ಎಲ್ಲ ಸರಕಾರಿ ಕಾಲೇಜುಗಳಲ್ಲಿ ಶುಕ್ರವಾರ ಚಿಕ್ಕೋಡಿ ಹಾಗೂ ಬೆಳಗಾವಿ ಶೈಕ್ಷಣಿಕ ಜಿಲ್ಲೆಗಳ ಸರಕಾರಿ ಪದವಿ ಪೂರ್ವ ವಿದ್ಯಾರ್ಥಿಗಳಿಗೆ ಸಿಇಟಿ, ಜೆಇಇ, ಎನ್‌ಇಇಟಿ ಸಂಬಂಧಿಸಿದಂತೆ ಉಚಿತ ಪೂರ್ವ ಸಿದ್ಧತೆಗಾಗಿ ಪರೀಕ್ಷೆಗಳನ್ನು ನಡೆಸುವ ಮೂಲಕ ಮಾದರಿಯಾಗಿದೆ.

ಜಿಪಂ ಸಿಇಒ ರಾಹುಲ್ ಶಿಂಧೆ ಅವರು, ಇದು ಪದವಿ ಪೂರ್ವ ಕಾಲೇಜು ಹಾಗೂ ಅಪೆಕ್ಸ್ ವೆಲ್ಫೇರ್ ಶಿಕ್ಷಣ ಸಂಸ್ಥೆಯಿಂದ ಸಾಧ್ಯವಾಗಿದೆ. ಒಟ್ಟು ಮೂರು ಹಂತಗಳಲ್ಲಿ ಪೂರ್ವ ಸಿದ್ಧತೆ ಪರೀಕ್ಷೆಗಳನ್ನು ಜಿಲ್ಲೆಯಾದ್ಯಂತ ತೆಗೆದು ಕೊಳ್ಳಲಾಗಿದೆ.

ಇದರಿಂದ ಸಾವಿರಾರು ವಿದ್ಯಾರ್ಥಿಗಳು ಭಾಗವಹಿಸಿ ಇದರ ಸದುಪಯೋಗ ಪಡೆದುಕೊಂಡಿದ್ದಾರೆ ಎಂದು ತಿಳಿಸಿದರು.

ಪರೀಕ್ಷೆಗಾಗಿ ಭಾಗವಹಿಸಿದ ಸಾವಿರಾರು ವಿದ್ಯಾರ್ಥಿಗಳಿಗೆ ಅಪೆಕ್ಸ್ ವೆಲ್ಫೇರ್ ಶಿಕ್ಷಣ ಸಂಸ್ಥೆ ಮುಂದೆ ಬಂದು ಉಚಿತವಾಗಿ ಪ್ರಶ್ನೆ ಪತ್ರಿಕೆ ಹಾಗೂ ಒ.ಎಂ.ಆರ್. ಶೀಟ್ ನೀಡಿರುವುದು ಅನುಕೂಲವಾಗಿವೆ.

ಸರಕಾರಿ ಪದವಿ ಪೂರ್ವ ವಿದ್ಯಾರ್ಥಿಗಳು ನೀಟ್ ಮತ್ತು ಸಿಇಟಿ ಹಾಗೂ ಜೆಇಇ ಅಂತಹ ಪರಿಕ್ಷೆಗಳಲ್ಲಿ ಪೂರ್ವ ತಯಾರಿ ಹಾಗೂ ಹಿಂಜರಿಕೆಯಿಂದ ಫಲಿತಾಂಶ ಕಡಿಮೆಯಾಗುವ ಸಾಧ್ಯತೆ ಇರುತ್ತದೆ. ಅದ್ದರಿಂದ ಪರೀಕ್ಷೆಗಳಲ್ಲಿ ಕಂಡು ಬರುವ ಪ್ರಶ್ನೆಗಳ ಶೈಲಿ ಮತ್ತು ಕಠಿಣತೆ ಅರಿಯುವಂತೆ ಮಾಡುವುದು. ಸಮಯ ಪ್ರಜ್ಞೆ ಮೈಗೂಡಿಸಿ ಯಾವ ಪ್ರಶ್ನೆ ಎಷ್ಟು ಸಮಯ ನೀಡಬೇಕು.

ಪ್ರಶ್ನೆ ಪತ್ರಿಕೆಯ ಮಾದರಿ ಯಾವ ರೀತಿಯಾಗಿ ಇರುತ್ತದೆ. ಯಾವ ವಿಷಯದ ಕುರಿತು ಹೆಚ್ಚಿನ ಪ್ರಶ್ನೆಗಳು ಬರುತ್ತವೆ. ಪ್ರಶ್ನೆಗಳಿಗೆ ಎಷ್ಟು ಉತ್ತರ ನೀಡಬೇಕು ಎಂಬ ಮಾಹಿತಿಯನ್ನು ಪೂರ್ವ ತಯಾರಿಕೆಯಲ್ಲಿ ಮಕ್ಕಳಿಗೆ ತಿಳಿಸುವುದರ ಮೂಲಕ ಮುಂಬರುವ ಸಿಇಟಿ, ಜೆಇಇ, ನೀಟ್ ಸಿದ್ಧತೆ ಮಾಡಿಕೊಳ್ಳಲು ಮಕ್ಕಳಿಗೆ ತುಂಬಾ ಅನುಕೂಲವಾಗಿದೆ.

ಪೂರ್ವ ಪರಿಕ್ಷೆಯಲ್ಲಿ ಕಂಡು ಬಂದ ನ್ಯೂನ್ಯತೆಗಳು ಹಾಗೂ ಸರಿಪಡಿಸಿಕೊಂಡು ಪರೀಕ್ಷೆಗಳಲ್ಲಿ ಉತ್ತಮ ಫಲಿತಾಂಶ ಪಡೆಯಲು ಸಾಧ್ಯ. ಇದರಿಂದ ವಿದ್ಯಾರ್ಥಿಗಳಿಗೆ ಮಾನಸಿಕವಾಗಿ ಹಾಗೂ ಭೌದ್ಧಿಕವಾಗಿ ತಯಾರಾಗಲೂ ಬಹಳಷ್ಟು ಸಹಾಯಕಾರಿಯಾಗಿದೆ ಎಂದು ತಿಳಿಸಿದ್ದಾರೆ.

ಡಿಡಿಪಿಯು ಗಳಾದ ಎಂ.ಎಂ.ಕಾಂಬಳೆ, ಪಿ.ಐ. ಭಂಡಾರಿ, ಅಪೆಕ್ಸ್ ವೆಲ್ಫೇರ್ ಮತ್ತು ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ನಾಗರಾಜ ತೊರವಿ ಅವರು ಪರೀಕ್ಷೆಗಳ ಜವಾಬ್ದಾರಿ ವಹಿಸಿ ಯಶಸ್ಸಿಗೊಳಿಸಿದ್ದಾರೆ.

ಬೆಳಗಾವಿ : ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಅವರು ಸೋಮವಾರ (ಏ.15) ಜಿಲ್ಲಾ ಚುನಾವಣಾಧಿಕಾರಿ ನತೇಶ್ ಪಾಟೀಲ ಅವರಿಗೆ ನಾಮಪತ್ರ ಸಲ್ಲಿಸಿದರು.ಇದೇ ವೇಳೆ ಜಗದೀಶ ಶೆಟ್ಟರ ಅವರು ಮಾತನಾಡಿ, ಏ. 17 ಬುಧವಾರ ಬೆಳಗ್ಗೆ 10 ಗಂಟೆಗೆ ಸಾವಿರಾರು ಕಾರ್ಯಕರ್ತರೊಂದಿಗೆ ಬೆಳಗಾವಿಯ ಸಮಾದೇವಿ ಗಲ್ಲಿಯ ಶ್ರೀ ಸಮಾದೇವಿ ಮಂದಿರದಿಂದ ಜಿಲ್ಲಾಧಿಕಾರಿ ಕಛೇರಿ ವರೆಗೆ ಬೃಹತ್ ಮೆರಣಣಿಗೆ ಮೂಲಕ ನಾಮಪತ್ರ ಸಲ್ಲಿಸಲಾವುದು ಎಂದು ತಿಳಿಸಿದರು. ಬೆಳಗಾವಿ ಲೋಕಸಭಾ ಅಭ್ಯರ್ಥಿ ಜಗದೀಶ್ ಶೆಟ್ಟರ್ ಅವರಿಗೆ ಮಾಜಿ ಸಚಿವ ರಮೆಶ್ ಜಾರಕಿಹೊಳಿ, ಸಂಸದರಾದ ಮಂಗಳ ಅಂಗಡಿ, ಮಾಜಿ ಶಾಸಕ ಅನಿಲ್ ಬೆನಕೆ, ವಿಧಾನ ಪರಿಷತ್ ಸದಸ್ಯ ಹಣಮಂತ ನಿರಾಣಿ ಸಾಥ್ ನೀಡಿದರು.

ಬೆಳಗಾವಿ : ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಸೋಮವಾರ ನಸಮಪತ್ರ ಸಲ್ಲಿಕೆ ಮಾಡಿದ್ದು, ಡಿಸಿಎಂ ಡಿ.ಕೆ ಶಿವಕುಮಾರ್ ಸೇರಿದಂತೆ ಜಿಲ್ಲೆಯ ನಾಯಕರು ಸಾಥ್ ನಡಿದರು. ಮಾಜಿ ಡಿಸಿಎಂ ಲಕ್ಷ್ಮಣ ಸವದಿ, ಮಾಜಿ ಸಂಸದ ಪ್ರಕಾಶ್ ಹುಕ್ಕೇರಿ, ಸಚಿವ ಸತೀಶ್ ಜಾರಕಿಹೊಳಿ, ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಸೇರಿದಂತೆ. ಕಾಂಗ್ರೆಸ್ ಶಾಸಕರು ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ನಾಮಪತ್ರ ಸಲ್ಲಿಕೆಗೂ ಮುನ್ನ ಮನೆಯಲ್ಲಿ ಮೃಣಾಲ್ ಹೆಬ್ಬಾಳ್ಕರ್ ಗೋಪೂಜೆ ಮನೆಯಲ್ಲಿ ವಿವಿಧ ಮಠಾಧೀಶರ ಪಾದಪೂಜೆ ಮಾಡಿದ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಪುತ್ರ

ಜಿಲ್ಲಾ ಸ್ವೀಪ್ ಸಮಿತಿಯಿಂದ ಕ್ಯಾಂಡಲ್ ಲೈಟ್ ಮೆರವಣಿಗೆ ಮೂಲಕ ಮತದಾನ ಜಾಗೃತಿ ಕಾರ್ಯಕ್ರಮ

ಕ್ಯಾಂಡಲ್‌ಲೈಟ್ ಮೆರವಣಿಗೆಯಲ್ಲಿ ಎಲ್ಲ ಇಲಾಖೆ ಅಧಿಕಾರಿ, ಸಿಬ್ಬಂದಿ ಕಡ್ಡಾಯವಾಗಿ ಭಾಗವಹಿಸಿ: ಸಿಇಒ ರಾಹುಲ್ ರತ್ನಂ ಪಾಂಡೆಯ

ಕೊಪ್ಪಳ ಏಪ್ರಿಲ್ 15 : ಏಪ್ರಿಲ್ 16 ರ ಮಂಗಳವಾರದಂದು ಸಂಜೆ ಮತದಾನ ಜಾಗೃತಿ ಕಾರ್ಯಕ್ರಮದ ಅಂಗವಾಗಿ ಜಿಲ್ಲಾ ಸ್ವೀಪ್ ಸಮಿತಿಯಿಂದ ನಗರದಲ್ಲಿ ಕ್ಯಾಂಡಲ್ ಲೈಟ್ ಮೆರವಣಿಗೆಯನ್ನು ಹಮ್ಮಿಕೊಂಡಿದ್ದು, ಈ ಕಾರ್ಯಕ್ರಮಕ್ಕೆ ಎಲ್ಲ ಇಲಾಖೆಗಳ ಅಧಿಕಾರಿಗಳು ತಮ್ಮ ಸಿಬ್ಬಂದಿಯೊಂದಿಗೆ ಕಡ್ಡಾಯವಾಗಿ ಹಾಜರಾಗಬೇಕು ಎಂದು ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನರ್ವಾಹಕ ಅಧಿಕಾರಿಗಳು ಹಾಗೂ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರಾದ ರಾಹುಲ್ ರತ್ನಂ ಪಾಂಡೆಯ ಅವರು ಅಧಿಕಾರಿಗಳಿಗೆ ಸೂಚಿಸಿದರು. ಜಿಲ್ಲಾ ಸ್ವೀಪ್ ಸಮಿತಿಯಿಂದ ಮಂಗಳವಾರದಂದು ಆಯೋಜಿಸಿರುವ ಕ್ಯಾಂಡಲ್ ಲೈಟ್ ಮೆರವಣಿಗೆ ಕಾರ್ಯಕ್ರಮದ ಪೂರ್ವ ಸಿದ್ದತೆಯ ಕುರಿತು ಚರ್ಚಿ ಸಲು ಸೋಮವಾರದಂದು ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನರ್ವಾಹಕ ಅಧಿಕಾರಿಗಳ ಕಚೇರಿಯಲ್ಲಿ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.ಭಾರತ ಚುನಾವಣಾ ಆಯೋಗದ ನರ್ದೇಶನದಂತೆ ಮತ್ತು ಲೋಕಸಭಾ ಸಾರ್ವತ್ರಿಕ ಚುನಾವಣೆ 2024ರ ಮತದಾನವು ಮೇ 07 ರಂದು ಎರಡನೇ ಹಂತದಲ್ಲಿ ನಡೆಯಲಿದ್ದು, ಈ ಸಂಬಂಧ ಮತದಾರರಲ್ಲಿ ಮತದಾನದ ಮಹತ್ವದ ಬಗ್ಗೆ ಜಾಗೃತಿ ಮೂಡಿಸುವ ಅವಶ್ಯಕತೆ ಇದೆ. ಅದರಂತೆ ಜಿಲ್ಲಾ ಸ್ವೀಪ್ ಸಮಿತಿಯಿಂದ ಜಿಲ್ಲೆಯ ಮತದಾರರಿಗೆ ಜಾಗೃತಿ ಮೂಡಿಸುವ ಸಲುವಾಗಿ ಮಂಗಳವಾರದಂದು ಸಂಜೆ 07 ಗಂಟೆಗೆ ಕೊಪ್ಪಳ ನಗರದ ಗಂಜ್ ವೃತ್ತದಿಂದ ಅಶೋಕ ವೃತ್ತದವರೆಗೆ ಒಂದು ತಂಡ ಹಾಗೂ ಗಡಿಯಾರ ಕಂಬ ವೃತ್ತದಿಂದ ಅಶೋಕ ವೃತ್ತದವರೆಗೆ ಒಂದು ತಂಡ, ಒಟ್ಟು ಎರಡು ತಂಡಗಳಿಂದ ಕ್ಯಾಂಡಲ್ ಲೈಟ್ ಮೆರವಣಿಗೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಈ ಕಾರ್ಯಕ್ರಮಕ್ಕೆ ಎಲ್ಲ ಇಲಾಖೆಗಳ ಅಧಿಕಾರಿಗಳು ತಮ್ಮ ಸಿಬ್ಬಂದಿಯೊಂದಿಗೆ ತಪ್ಪದೇ ಹಾಜರಾಗಬೇಕು. ಮೆರವಣ ಗೆಯಲ್ಲಿ ಭಾಗವಹಿ ಸಬೇಕು ಎಂದು ಸಿಇಒ ಅವರು ಅಧಿಕಾ ರಿಗಳಿಗೆ ಸೂಚಿಸಿದರು. (2 ನೇ ಪುಟಕ್ಕೆ)

ಲೋಕಸಭಾ ಚುನಾವಣೆ: ಇಂದು 3 ಅಭ್ಯರ್ಥಿಗಳಿಂದ ನಾಮಪತ್ರಗಳ ಸಲ್ಲಿಕೆ

ಕೊಪ್ಪಳ, ಏಪ್ರಿಲ್ 15 : ಲೋಕಸಭಾ ಚುನಾವಣೆ-2024 ರ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾದಿಕಾರಿಗಳಾದ ನಲಿನ್ ಅತುಲ್ ಅವರು ನಾಮ ಪತ್ರ ಸಲ್ಲಿಕೆಯ ಎರಡನೇ ದಿನವಾದ ಇಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅಭ್ಯರ್ಥಿಗಳಿಂದ ಚುನಾವಣಾ ನಾಮಪತ್ರಗಳನ್ನು ಸ್ವೀಕರಿಸಿದರು.

8-ಕೊಪ್ಪಳ ಲೋಕಸಭಾ ಕ್ಷೇತ್ರಕ್ಕೆ ನಾಮಪತ್ರ ಸಲ್ಲಿಕೆ ಏಪ್ರಿಲ್ 12 ರಿಂದ ಆರಂಭವಾಗಿದ್ದು, ಸೋಮವಾರದಂದು ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷದ ಅಭ್ಯರ್ಥಿಯಾಗಿ ನಿರುಪಾದಿ ಹಾಗೂ ಪಕ್ಷೇತರ ಅಭ್ಯರ್ಥಿಗಳಾಗಿ ಮಲ್ಲಿಕಾರ್ಜುನ ಹಡಪದ ಮತ್ತು ಶಿವಪ್ಪ ಅವರು ತಲಾ 01 ನಾಮಪತ್ರ ಸಲ್ಲಿಸಿದ್ದು, ಈ ಮೂರು ಅಭ್ಯರ್ಥಿಗಳಿಂದ ಒಟ್ಟು 3 ಚುನಾವಣಾ ನಾಮಪತ್ರಗಳು ಎರಡನೇ ದಿನ ಸಲ್ಲಿಕೆಯಾಗಿವೆ.

ಅಧಿಕಾರಕ್ಕೆ ಬಂದರೆ ಪಶ್ಚಿಮ ಉತ್ತರಪ್ರದೇಶ ಪ್ರತ್ಯೇಕ ರಾಜ್ಯ ರಚನೆ

ಲಖ್ನೋ, ಏ.15- ಒಂದೊಮ್ಮೆ ನಮ್ಮ ಪಕ್ಷವು ರಾಜ್ಯದಲ್ಲಿ ಅಧಿಕಾರಕ್ಕೆ ಬಂದರೆ ಪಶ್ಚಿಮ ಉತ್ತರಪ್ರದೇಶವನ್ನು ಪ್ರತ್ಯೇಕ ರಾಜ್ಯವನ್ನಾಗಿ ಘೋಷಿಸಲಾಗುವುದು ಎಂದು ಬಿಎಸ್ಪಿ ಮುಖ್ಯಸ್ಥೆ ಮಾಯಾವತಿ ಹೇಳಿದ್ದಾರೆ.

ಪಶ್ಚಿಮ ಉತ್ತರ ಪ್ರದೇಶದಲ್ಲಿ ಹೈಕೋರ್ಟ್ ಪೀಠ ಸ್ಥಾಪಿಸುವುದಾಗಿ ಮಾಯಾವತಿ ಘೋಷಿಸಿದ್ದಾರೆ. ನಮ್ಮ ಪಕ್ಷ ಕೆಲಸ ಮಾಡುವುದರಲ್ಲಿ ನಂಬಿಕೆ ಇಟ್ಟಿದೆ ಹಾಗಾಗಿ ಪ್ರಣಾಳಿಕೆ ಬಿಡುಗಡೆ ಮಾಡುವುದಿಲ್ಲ ಎಂದು ಮಾಯಾ ವತಿ ಹೇಳಿದರು. ಉತ್ತರಪ್ರ ದೇಶದಲ್ಲಿ ನನ್ನ ನೇತೃತ್ವದಲ್ಲಿ 4 ಬಾರಿ ಸರ್ಕಾರ ರಚನೆಯಾಗಿದೆ, ನಮ್ಮ ಸರ್ಕಾರದಲ್ಲಿ ಯಾವುದೇ ಕೋಮುಗಲಭೆಗಳು ಇರಲಿಲ್ಲ, ಆದರೆ ಎಸ್ಪಿ ಸರ್ಕಾರದಲ್ಲಿ, ಜಾಟ್ ಮತ್ತು ಮುಸ್ಲಿಂ ಸಮುದಾಯಗಳನ್ನು